# ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 40 ಗ್ರಾಪಂಅ 2018

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:02-02-2019

## ಸುತ್ತೋಲೆ

ವಿಷಯ: ರಾಜ್ಯದ ಗ್ರಾಮ ಪಂಚಾಯತಿ ಅಧ್ಯಕ್ಷನು ಅಥವಾ ಉಪಾಧ್ಯಕ್ಷನ ವಿರುದ್ಧ ಅವಿಶ್ವಾಸ ಸೂಚನೆ ಬಗ್ಗೆ.

ಉಲ್ಲೇಖ:
1. ಮಾನ್ಯ ಉಚ್ಚ ನ್ಯಾಯಾಲಯವು ರಿಟ್ ಅಪೀಲು ಸಂಖ್ಯೆ:844/2018 ಹಾಗೂ ಇತರೆ ಸಂಬಂಧಿಸಿದ ರಿಟ್ ಅಪೀಲು ಪ್ರಕರಣಗಳಲ್ಲಿ ದಿನಾಂಕ:12-10-2018 ರಂದು ನೀಡಿರುವ ಅಂತಿಮ ಆದೇಶ.
2. ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ 40 ಗ್ರಾಪಂಅ 2018, ದಿನಾಂಕ:17-10-2018.
3. ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ 40 ಗ್ರಾಪಂಅ 2018, ದಿನಾಂಕ:25-01-2019.

***

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 49 ರಡಿ ಗ್ರಾಮ ಪಂಚಾಯತಿಯ ಅಧ್ಯಕ್ಷನ ಅಥವಾ ಉಪಾಧ್ಯಕ್ಷನ ವಿರುದ್ಧ ಅವಿಶ್ವಾಸ ಸೂಚನೆ ಮಂಡಿಸಲು ಅವಕಾಶ ಕಲ್ಪಿಸಲಾಗಿದ್ದು, ಈ ಉದ್ದೇಶಕ್ಕಾಗಿ ಉಪವಿಭಾಗಾಧಿಕಾರಿಗಳನ್ನು ಸಕ್ಷಮ ಪ್ರಾಧಿಕಾರಿಯನ್ನಾಗಿ ನಿರ್ದಿಷ್ಟಪಡಿಸಿದೆ.

ಗ್ರಾಮ ಪಂಚಾಯತಿ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ವಿರುದ್ಧ ಅವಿಶ್ವಾಸ ಸೂಚನೆ ಬಗ್ಗೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಯ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ವಿರುದ್ಧ ಅವಿಶ್ವಾಸ ಸೂಚನೆ ಮಂಡನೆ) ನಿಯಮಗಳು, 1994 ಮತ್ತು 2018 ಅನ್ನು ರೂಪಿಸಲಾಗಿದ್ದು, ಉಪವಿಭಾಗಾಧಿಕಾರಿ ರವರು ಅವಿಶ್ವಾಸ ಸೂಚನೆಗೆ ಸಂಬಂಧಿಸಿದ ನೋಟೀಸನ್ನು ಸ್ವೀಕರಿಸಿದ ದಿನಾಂಕದಿಂದ 30 ದಿವಸಗಳಿಗೆ ಮೀರದಂತೆ ಅವಿಶ್ವಾಸ ಸೂಚನೆ ಸಭೆ ಕರೆದು ಅವಿಶ್ವಾಸ ಸೂಚನೆ ಮಂಡಿಸಲು ಕ್ರಮ ವಹಿಸಬೇಕಾಗಿರುತ್ತದೆ.

ಮಾನ್ಯ ಉಚ್ಚ ನ್ಯಾಯಾಲಯವು ರಿಟ್ ಅಪೀಲು ಸಂಖ್ಯೆ:844/2018 ಹಾಗೂ ಇತರೆ ಸಂಬಂಧಿಸಿದ ರಿಟ್ ಅಪೀಲು ಪ್ರಕರಣಗಳಲ್ಲಿ ದಿನಾಂಕ:12-10-2018 ರಂದು ನೀಡಿರುವ ಅಂತಿಮ ಆದೇಶದಂತೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 49(1) ರಂತೆ ಕ್ರಮ ವಹಿಸಲು ಉಲ್ಲೇಖ (2) ರ ಸರ್ಕಾರದ ಪತ್ರದಲ್ಲಿ ಎಲ್ಲಾ ಉಪವಿಭಾಗಾಧಿಕಾರಿಗಳಿಗೆ ಈಗಾಗಲೇ ತಿಳಿಸಲಾಗಿದೆ.

ಉಲ್ಲೇಖ (3)ರ ಸರ್ಕಾರದ ಪತ್ರದಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 49(1) ಮತ್ತು 49(2) ರ ಉಪಬಂಧಗಳು ಪ್ರತ್ಯೇಕವಾಗಿದ್ದು, ಉಪಬಂಧ 49(1) ರಡಿ ಅವಿಶ್ವಾಸ ನಿರ್ಣಯವನ್ನು 30 ತಿಂಗಳ ನಂತರ ತರಲು ಯಾವುದೇ ಆಪಾದನೆಗಳ ಅವಶ್ಯಕತೆ ಇರುವುದಿಲ್ಲವೆಂದು ಹಾಗೂ ಉಪಬಂಧ 49(2) ರಡಿ ಅವಿಶ್ವಾಸ ನಿರ್ಣಯವನ್ನು ತರಬೇಕಾದರೆ ಸರ್ಕಾರ ನಿರ್ದಿಷ್ಟ ನಿಯಮಗಳನ್ನು ಹೊಸದಾಗಿ ರಚಿಸಬೇಕಾಗಿರುತ್ತದೆ ಎಂದು ಮಾನ್ಯ ಉಚ್ಚ ನ್ಯಾಯಾಲಯವು ರಿಟ್ ಅಪೀಲು ಸಂಖ್ಯೆ:844/2018 ಹಾಗೂ ಇತರೆ ಸಂಬಂಧಿಸಿದ ರಿಟ್ ಅಪೀಲು ಪ್ರಕರಣಗಳಲ್ಲಿ ದಿನಾಂಕ: 12-10-2018 ರಂದು ಆದೇಶಿಸಿರುವ ಹಿನ್ನೆಲೆಯಲ್ಲಿ ಅದರಂತೆ ಕ್ರಮ ವಹಿಸಲು ತಿಳಿಸಲಾಗಿದೆ.

ಆದಾಗ್ಯೂ, ಕೆಲವು ಉಪವಿಭಾಗಾಧಿಕಾರಿಗಳು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 49, ಸಂಬಂಧಿಸಿದ ನಿಯಮಗಳು ಹಾಗೂ ನ್ಯಾಯಾಲಯದ ಆದೇಶಗಳನ್ನು ಪಾಲಿಸದೆ 30 ದಿನಗಳ ಕಾಲಮಿತಿ ಉಲ್ಲಂಘನೆ ಹಾಗೂ ನ್ಯಾಯಾಲಯದ ಆದೇಶದ ಉಲ್ಲಂಘನೆ ಮಾಡಿ ಗ್ರಾಮ ಪಂಚಾಯತಿ ಅಧ್ಯಕ್ಷ ಅಥವಾ ಉಪಾಧ್ಯಕ್ಷನ ವಿರುದ್ಧ ಅವಿಶ್ವಾಸ ಸೂಚನೆ ಮಂಡಿಸುತ್ತಿದ್ದು, ಈ ಸಂಬಂಧ ಬಾಧಿತ ವ್ಯಕ್ತಿಗಳು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯಗಳಲ್ಲಿ ರಿಟ್ ಅರ್ಜಿಗಳನ್ನು ದಾಖಲಿಸುತ್ತಿದ್ದು, ಮಾನ್ಯ ಉಚ್ಚ ನ್ಯಾಯಾಲಯವು ಈ ವಿಷಯನ್ನು ಗಂಭೀರವಾಗಿ ಪರಿಗಣಿಸಿ ವಿಷಯದಲ್ಲಿ ಸ್ಪಷ್ಟನೆ ನೀಡಲು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ ರವರನ್ನು ಖುದ್ದಾಗಿ ಹಾಜರಾಗುವಂತೆ ಆದೇಶ ನೀಡಿರುತ್ತದೆ (ರಿಟ್ ಅರ್ಜಿ ಸಂಖ್ಯೆ: 5304/2019 (ಎಲ್‌ಬಿ) ಮತ್ತು ರಿಟ್ ಅರ್ಜಿ ಸಂಖ್ಯೆ: 105371/2019 ಸೇರಿದಂತೆ 104204/2019 (ಎಲ್‌ಬಿ)).

ಸರ್ಕಾರವು ಉಪವಿಭಾಗಾಧಿಕಾರಿಗಳ ನಿರ್ಲಕ್ಷ್ಯ ಧೋರಣೆಯನ್ನು ಗಂಭೀರವಾಗಿ ಪರಿಗಣಿಸಿದೆ. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರಡಿ ಪ್ರದತ್ತವಾಗಿರುವ ಅಧಿಕಾರವನ್ನು ಸಮರ್ಪಕವಾಗಿ ನಿರ್ವಹಿಸುವುದು ಉಪವಿಭಾಗಾಧಿಕಾರಿಗಳ ಕರ್ತವ್ಯವಾಗಿರುತ್ತದೆ. ಈ ಸಂಬಂಧ ಯಾವುದಾದರೂ ಸಂದೇಹಗಳಿದ್ದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಸ್ಪಷ್ಟನೆ ಪಡೆಯಬಹುದಾಗಿದೆ. ಇನ್ನು ಮುಂದೆ ವಿಷಯದ ಗಂಭೀರತೆಯನ್ನು ಅರಿತು ಎಲ್ಲಾ ಉಪವಿಭಾಗಾಧಿಕಾರಿಗಳು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಉಲ್ಲಂಘನೆಗೆ ಅವಕಾಶ ನೀಡದಂತೆ ಕಟ್ಟುನಿಟ್ಟಿನ ಕ್ರಮಕೈಗೊಳ್ಳಲು ಸೂಚಿಸಿದೆ. ತಪ್ಪಿದಲ್ಲಿ ಸಂಬಂಧಪಟ್ಟ ಉಪವಿಭಾಗಾಧಿಕಾರಿಗಳನ್ನೇ ನೇರ ಹೊಣೆಗಾರರನ್ನಾಗಿ ಮಾಡಿ ಕರ್ತವ್ಯ ನಿರ್ಲಕ್ಷ್ಯದ ಬಗ್ಗೆ ಕರ್ನಾಟಕ ನಾಗರೀಕ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957 ರನ್ವಯ ಶಿಸ್ತಿನ ಕ್ರಮ ಜರುಗಿಸಲಾಗುವುದು.

2/2/19
(ಎಲ್.ಕೆ. ಅತೀಕ್)
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

2/2/19
(ಡಾ: ರಾಜ್‌ಕುಮಾರ್ ಖತ್ರಿ)
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಕಂದಾಯ ಇಲಾಖೆ.

ಗೆ,

1) ಪ್ರಾದೇಶಿಕ ಆಯುಕ್ತರುಗಳು, ಬೆಂಗಳೂರು, ಮೈಸೂರು, ಬೆಳಗಾವಿ ಮತ್ತು ಕಲಬುರಗಿ ವಿಭಾಗಗಳು.
2) ಜಿಲ್ಲಾಧಿಕಾರಿಗಳು, ಎಲ್ಲಾ ಜಿಲ್ಲೆಗಳು.
3) ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು, ಎಲ್ಲಾ ಜಿಲ್ಲಾ ಪಂಚಾಯತಿಗಳು.
4) ರಾಜ್ಯದ ಎಲ್ಲಾ ಉಪವಿಭಾಗಾಧಿಕಾರಿಗಳು.
5) ಕಾರ್ಯನಿರ್ವಾಹಕಾಧಿಕಾರಿಗಳು, ಎಲ್ಲಾ ತಾಲ್ಲೂಕು ಪಂಚಾಯತಿಗಳು.
6) ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಎಲ್ಲಾ ಗ್ರಾಮ ಪಂಚಾಯತಿಗಳು.

ಪ್ರತಿ:

1) ಮಾನ್ಯ ಕಂದಾಯ ಸಚಿವರ ಆಪ್ತಕಾರ್ಯದರ್ಶಿಗಳು, ವಿಧಾನ ಸೌಧ.
2) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಆಪ್ತಕಾರ್ಯದರ್ಶಿಗಳು, ವಿಕಾಸಸೌಧ.
3) ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತಕಾರ್ಯದರ್ಶಿಗಳು, ವಿಧಾನಸೌಧ.
4) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ ರವರ ಆಪ್ತಕಾರ್ಯದರ್ಶಿಗಳು.
5) ಸರ್ಕಾರದ ಕಾರ್ಯದರ್ಶಿ, (ಪಂಚಾಯತ್ ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ ರವರ ಆಪ್ತಕಾರ್ಯದರ್ಶಿಗಳು, ಬಹುಮಹಡಿ ಕಟ್ಟಡ.
6) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ ರವರ ಆಪ್ತಕಾರ್ಯದರ್ಶಿಗಳು, ಬಹುಮಹಡಿ ಕಟ್ಟಡ.
7) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ರವರ ಆಪ್ತಕಾರ್ಯದರ್ಶಿಗಳು, ವಿಧಾನಸೌಧ.
8) ಸಂಪಾದಕರು, ಕರ್ನಾಟಕ ವಿಕಾಸ/ ಇಲಾಖಾ ವೆಬ್‌ಸೈಟ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ, ಬಹುಮಹಡಿ ಕಟ್ಟಡ.
9) ಹೆಚ್ಚುವರಿ ಪ್ರತಿ/ ಶಾಖಾ ರಕ್ಷಾ ಕಡತ